ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ, ನ್ಯಾಕ್‌ನಿಂದ $B^+$ (CGPA: 2.74) ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440 ಚಾಮರಾಜನಗರ ಜಿಲ್ಲೆ**

☎: 08224-252149 🖷: 08224-256051 jsscwk@gmail.com www. jsscwkgl.org

## ವಧು/ವರದಕ್ಷಿಣೆ ಶಿಕ್ಷಾರ್ಹ ಅಪರಾದ:– ನಿರ್ಮಲ ಮಧುಸೂಧನ

ಕೊಳ್ಳೇಗಾಲ: 27-01-2026ರ ಮಂಗಳವಾರ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ರಾಜ್ಯಶಾಸ್ತ್ರ ವಿಭಾಗದ ವತಿಯಿಂದ ವಧು ವರದಕ್ಷಿಣೆ ವಿರೋಧಿ ಅರಿವು ಕಾರ್ಯಕ್ರಮ ಎಂಬ ವಿಷಯ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಲು ಆಗಮಿಸಿದ್ದ ಕೊಳ್ಳೇಗಾಲದ ಹಿರಿಯ ವಕೀಲರಾದ ಶ್ರೀಮತಿ ನಿರ್ಮಲ ಮಧುಸೂಧನ ಅವರು ಮಾತನಾಡಿ ವರದಕ್ಷಿಣೆ ಎನ್ನುವುದು ಮದುವೆಯ ಸಂದರ್ಭದಲ್ಲಿ ವಧುವಿನ ಕುಟುಂಬವು ವರನಿಗೆ ಹಣ, ಆಸ್ತಿ ಅಥವಾ ಉಡುಗೊರೆಗಳನ್ನು ನೀಡುವುದು ಸಾಮಾಜಿಕ ಪಿಡುಗಾಗಿದ್ದು ಇದು ಹೆಣ್ಣು ಮಕ್ಕಳ ಮೇಲೆ ನಡೆಯುತ್ತಿರುವ ದೌರ್ಜನ್ಯವಾಗಿದೆ. ಹೆಣ್ಣುಮಕ್ಕಳು ಕೌಟಂಬಿಕ ಹಿಂಸೆಗೆ ಒಳಗಾಗುತ್ತಿದ್ದಾರೆ. ಇಂತಹ ಮಾನಸಿಕ ಹಾಗೂ ದೈಹಿಕ ಕಿರುಕುಳವನ್ನು ತಪ್ಪಿಸುವ ಸಲುವಾಗಿ 1961ರಲ್ಲಿ ವರದಕ್ಷಿಣೆ ನಿಷೇಧ ಕಾಯ್ದೆ ಜಾರಿಗೆ ತರುವ ಮೂಲಕ ವರದಕ್ಷಿಣೆ ನೀಡುವುದು ಮತ್ತು ತೆಗೆದುಕೊಳ್ಳುವುದು ಶಿಕ್ಷಾರ್ಹ ಅಪರಾಧ ಎಂದು ತಿಳಿಸಿ ನೀವು ವರದಕ್ಷಿಣೆ ಕೊಡುವುದಾಗಲಿ ಪಡೆಯುವುದಾಗಲಿ ಮಾಡಬಾರದೆಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಡಾ.ಹೆಚ್ ಎಸ್ ಕೊಂಗಳಪ್ಪರವರು ವರದಕ್ಷಿಣೆ ಪಿಡುಗು ನಿವಾರಣೆ ಆಗಬೇಕಾದರೆ ಪ್ರತಿ ಕುಟುಂಬದಲ್ಲಿ ಜಾಗೃತಿ ಮೂಡಿಸುವುದು ಅನಿವಾರ್ಯ. ವಿದ್ಯಾರ್ಥಿನಿಯರು ಆ ಕೆಲಸ ನಿರ್ವಹಿಸಬೇಕೆಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಡಾ. ಜಿ.ಎಸ್ ಸುಮ, ರಾಜ್ಯಶಾಸ್ತ್ರ ಸಹಾಯಕ ಪ್ರಾಧ್ಯಾಪಕರು, ಅಧ್ಯಾಪಕರು, ಅಧ್ಯಾಪಕೇತರರು ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಕೊಳ್ಳೇಗಾಲದ ಹಿರಿಯ ವಕೀಲರಾದ ಶ್ರೀಮತಿ ನಿರ್ಮಲ ಮಧುಸೂಧನರವರು ವಧು ವರದಕ್ಷಿಣೆ ವಿರೋದಿ ಅರಿವು ಎಂಬ ವಿಷಯದ ಮೇಲೆ ಉಪನ್ಯಾಸ ನೀಡುತ್ತಿರುವುದು. ಚಿತ್ರದಲ್ಲಿ ಪ್ರಾಂಶುಪಾಲರಾದ ಡಾ.ಹೆಚ್ ಎಸ್ ಕೊಂಗಳಪ್ಪ, ಡಾ. ಜಿ.ಎಸ್ ಸುಮ, ರಾಜ್ಯಶಾಸ್ತ್ರ ಸಹಾಯಕ ಪ್ರಾಧ್ಯಾಪಕರು




ಕಾರ್ಯಕ್ರಮದಲ್ಲಿ ಭಾಗವಹಿಸಿರುವ ಅಧ್ಯಾಪಕರು ಹಾಗೂ ವಿದ್ಯಾರ್ಥಿನಿಯರು

